ಪ್ರಜಾ ಭಾರತ

ಕನ್ನಡ ದಿನಪತ್ರಿಕೆ

ಸತ್ಯದ ಪರ - ಪ್ರಜೆಗಳ ಧ್ವನಿ..!



'ನನ್ನ ಹೇಳಿಕೆಯನ್ನು ಉದ್ದೇಶಪೂರ್ವಕವಾಗಿ ತಿರುಚಲಾಗಿದೆ': ಛಲವಾದಿ ನಾರಾಯಣಸ್ವಾಮಿ

ಸಂಪಾದಕ: ದಿನೇಶ್ ಬೆಳ್ಳಾವರ, ಮೊ: 94821 01707 Email. prajabharathanews@gmail.com ಸಹ ಸಂಪಾದಕ : ಬಿ.ಬಿ ಶಿವರಾಜು, ಮೊ: 98809 08468

Volume-01 Issue-65 HASSAN Date : 06.11.2026 FRIDAY Reg No.PRGI No. KNKAN/26/A6168 Page-02 Rs.1.00

ಸಂಪುಟ-01 ಸಂಚಿಕೆ-65 ಹಾಸನ ದಿನಾಂಕ: 06.11.2026 ಶುಕ್ರವಾರ ರಿ.ನಂ.PRGI No. KNKAN/26/A6168 ಪುಟ:02 ಬೆಲೆ:1.00ರೂ.

ಪ್ರೋಟೋಕಾಲ್ ಹೆಸರಿನಲ್ಲಿ ಸಿಬ್ಬಂದಿಗೆ ಕಿರಿಕಿರಿ : ಡಿಸಿ ಗರಂ



ಪ್ರಜಾ ಭಾರತ ವರದಿ

ಹಾಸನ: ಶ್ರೀ ಹಾಸನಾಂಬೆ ದೇವಿಯ ದರ್ಶನೋತ್ಸವದ ವೇಳೆ ಪ್ರೋಟೋಕಾಲ್ ಹೆಸರಿನಲ್ಲಿ ಕರ್ತವ್ಯ ನಿರತ ಕಂದಾಯ ಇಲಾಖೆ ಸಿಬ್ಬಂದಿಗೆ ಕಾಂಗ್ರೆಸ್ ಕಾರ್ಯಕರ್ತರು ಕಿರಿಕಿರಿ ಉಂಟುಮಾಡಿದ ಘಟನೆ ನಡೆದಿದೆ.

ರಾಮನಗರ ಹಾಗೂ ಕನಕಪುರದಿಂದ ಆಗಮಿಸಿದ್ದ ಕಾಂಗ್ರೆಸ್ ಕಾರ್ಯಕರ್ತರನ್ನು ಪ್ರೋಟೋಕಾಲ್ ವ್ಯವಸ್ಥೆಯಡಿ ದೇವಾಲಯದ ಮುಖ್ಯದ್ವಾರದವರೆಗೆ ವಿಎ ಮನು ಕರೆತಂದಿದ್ದರು. ಆದರೆ, ತಮ್ಮೊಂದಿಗೆ ಸಿಬ್ಬಂದಿಯೂ ದೇವಾಲಯದ ಒಳಗೆ ಬರಬೇಕೆಂದು ಕಾರ್ಯಕರ್ತರು ಪಟ್ಟು ಹಿಡಿದಿದ್ದಾರೆ. ಅಪರ ಜಿಲ್ಲಾಧಿಕಾರಿಗಳ ಸೂಚನೆಯಂತೆ ಗೇಟ್‌ವರೆಗೆ ಮಾತ್ರ ತಮ್ಮ ಕರ್ತವ್ಯವಿದೆ ಎಂದು ಮನು ಸ್ಪಷ್ಟಪಡಿಸಿದಾಗ ವಾಗ್ವಾದ ನಡೆದಿದೆ ಎನ್ನಲಾಗಿದೆ.

ಬಳಿಕ ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ಅವರನ್ನು ಭೇಟಿಯಾದ ಕಾರ್ಯಕರ್ತರು ವಿಎ ವಿರುದ್ಧ ದೂರು ನೀಡಿದ್ದಾರೆ. ಇದರಿಂದ ಅಸಮಾಧಾನಗೊಂಡ ಡಿಸಿ, ಮನು ಅವರನ್ನು ಅಮಾನತು ಮಾಡುವುದಾಗಿ ಎಚ್ಚರಿಕೆ ನೀಡಿದ್ದಾರೆ ಎನ್ನಲಾಗಿದೆ. ಇದೇ ವೇಳೆ ಮತ್ತೊಬ್ಬ ಅಧಿಕಾರಿ ಸುಪ್ರೀತ್ ವಿರುದ್ಧವೂ ದೂರು ನೀಡಲಾಗಿದೆ.

ಪರಿಸ್ಥಿತಿ ಮುಜುಗರಕ್ಕೆ ಕಾರಣವಾಗುತ್ತಿದ್ದಂತೆ ಜಿಲ್ಲಾಧಿಕಾರಿಗಳು ಕಾರ್ಯಕರ್ತರ ಬಳಿ ಕ್ಷಮೆ ಕೋರಿದ್ದಾರೆ ಎನ್ನಲಾಗಿದೆ. ಹೊರಡುವಾಗ ಕಾರ್ಯಕರ್ತರು, "ಮೇಡಂ, ಹಾಸನಾಂಬೆ ದೇವಿಯನ್ನು ಇಲ್ಲಿಯೇ ನೋಡಿದಂತಾಯಿತು" ಎಂದು ವ್ಯಂಗ್ಯವಾಗಿ ಹೇಳಿ ತೆರಳಿದ್ದಾರೆ.

ಕಾಡಾನೆ ಕಾಟದ ಬೆನ್ನಲ್ಲೇ ಕಳ್ಳರ ಕಣ್ಣು ಕಾಫಿ ಫಸಲಿನ ಮೇಲೆ



ಪ್ರಜಾ ಭಾರತ ವರದಿ

ಬೇಲೂರು : ಒಂದೆಡೆ ಕಾಡಾನೆಗಳ ಹಾವಳಿಯಿಂದ ಬೆಳೆ ನಷ್ಟ, ಮತ್ತೊಂದೆಡೆ ಕಾಫಿ ಫಸಲಿನ ಮೇಲೆ ಕಳ್ಳರ ಕಣ್ಣು! ಕಾಡುಪ್ರಾಣಿಗಳ ಉಪಟಳದಿಂದ ಈಗಾಗಲೇ ಸಂಕಷ್ಟ ಎದುರಿಸುತ್ತಿರುವ ಕಾಫಿ ಬೆಳೆಗಾರರಿಗೆ ಇದೀಗ ಕಳ್ಳರ ಕಾಟವೂ ಹೊಸ ತಲೆನೋವಾಗಿ ಪರಿಣಮಿಸಿದೆ.

ತಾಲ್ಲೂಕಿನ ಬಕ್ಕರವಳ್ಳಿ ಗ್ರಾಮದ ಮೊಗಸಾವರದ ಮಂಜುನಾಥ್ ಅವರಿಗೆ ಸೇರಿದ ಕಾಫಿ ತೋಟಕ್ಕೆ ಕಳೆದ ರಾತ್ರಿ ನುಗ್ಗಿರುವ ಕಳ್ಳರು, ಕಾಫಿ ರೆಕ್ಕೆ ಸಮೇತ ಫಸಲನ್ನು ಕೊಯ್ದು ಕಳವು ಮಾಡಿದ್ದಾರೆ. ಬೆಳೆಗಾರರು ಕಷ್ಟಪಟ್ಟು ಬೆಳೆದ ಫಸಲನ್ನೇ ಗುರಿಯಾಗಿಸಿಕೊಂಡಿರುವ ಕಳ್ಳರ ಕೃತ್ಯದಿಂದ ತೋಟದ ಮಾಲೀಕರಿಗೆ ನಷ್ಟ ಉಂಟಾಗಿದೆ.

ಘಟನೆಗೆ ಸಂಬಂಧಿಸಿದಂತೆ ಅರೇಹಳ್ಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಕಾಫಿ ಫಸಲು ಕಳವು ಮಾಡಿರುವ ಕಳ್ಳರನ್ನು ಪತ್ತೆಹಚ್ಚಿ ಕಾನೂನು ಕ್ರಮ ಕೈಗೊಳ್ಳುವಂತೆ ಬೆಳೆಗಾರರು ಒತ್ತಾಯಿಸಿದ್ದಾರೆ.

ಕಾಡಾನೆಗಳಿಂದ ಬೆಳೆ ಉಳಿಸಿಕೊಳ್ಳುವುದೇ ಸವಾಲಾಗಿರುವ ಸಂದರ್ಭದಲ್ಲಿ, ಈಗ ಫಸಲನ್ನು ಕಳ್ಳರಿಂದಲೂ ಕಾಪಾಡಿಕೊಳ್ಳಬೇಕಾದ ಅನಿವಾರ್ಯತೆ ಎದುರಾಗಿದೆ. ಕಾಫಿ ತೋಟಗಳ ಮಾಲೀಕರು ರಾತ್ರಿ ವೇಳೆ ಹೆಚ್ಚಿನ ನಿಗಾ ವಹಿಸುವಂತೆ ಮನವಿ ಮಾಡಲಾಗಿದೆ.

ಗ್ಯಾರಂಟಿ ಹೊರೆ ಜನರ ಹೆಗಲಿಗೆ

ಹಾಲು, ಮೊಸರು, ಬಸ್ ಪ್ರಯಾಣ ದರ ಏರಿಕೆ ಬೆನ್ನಲ್ಲೇ ಆಸ್ತಿ ನೋಂದಣಿ ಮೌಲ್ಯ ಹೆಚ್ಚಳದ ಆತಂಕ

● ಪ್ರಜಾ ಭಾರತ ವಿಶೇಷ ವರದಿ

ಹಾಸನ: ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆಗಳ ನಡುವೆಯೇ ಜನಸಾಮಾನ್ಯರ ಬದುಕಿನ ವೆಚ್ಚ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿದೆ. ನಂದಿನಿ ಹಾಲು ಮತ್ತು ಮೊಸರಿನ ದರ ಏರಿಕೆಯ ಬಿಸಿ ಇನ್ನೂ ತಣ್ಣಗಾಗುವ ಮುನ್ನವೇ ಬಸ್ ಪ್ರಯಾಣ ದರವೂ ಹೆಚ್ಚಳವಾಗಿದ್ದು, ಇದೀಗ ಆಸ್ತಿ ನೋಂದಣಿ ಮಾರ್ಗಸೂಚಿ ಮೌಲ್ಯ ಪರಿಷ್ಕರಣೆಯ ಮಾತು ಮುನ್ನೆಲೆಗೆ ಬಂದಿದೆ. ಒಂದರ ಹಿಂದೆ ಒಂದರಂತೆ ಬೀಳುತ್ತಿರುವ ಈ ಬೆಲೆ ಏರಿಕೆಯ ಹೊಡೆತದಿಂದ ಮಧ್ಯಮ ಹಾಗೂ ಬಡ ವರ್ಗದ ಕುಟುಂಬಗಳ ಮಾಸಿಕ ಬಜೆಟ್ ಅಸ್ತವ್ಯಸ್ತವಾಗುವ ಆತಂಕ ಎದುರಾಗಿದೆ.

ಸರ್ಕಾರ ಮಹಿಳೆಯರಿಗೆ ಮಾಸಿಕ ರೂ.2,000, ಮಹಿಳೆಯರಿಗೆ ಉಚಿತ ಬಸ್ ಪ್ರಯಾಣ, ಉಚಿತ ವಿದ್ಯುತ್ ಸೇರಿದಂತೆ ಐದು ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಿದೆ. ಈ ಯೋಜನೆಗಳು ಅರ್ಹ ಫಲಾನುಭವಿಗಳಿಗೆ ನೆರವಾಗುತ್ತಿರುವುದರ ನಡುವೆಯೇ, ಮತ್ತೊಂದೆಡೆ ಅಗತ್ಯ ವಸ್ತುಗಳು ಮತ್ತು ಸೇವೆಗಳ ಬೆಲೆ ಹೆಚ್ಚುತ್ತಿರುವುದು ಸಾರ್ವಜನಿಕ ಚರ್ಚೆಗೆ ಕಾರಣವಾಗಿದೆ. ಸರ್ಕಾರದ ಯೋಜನೆಗಳಿಂದ ದೊರೆಯುವ ಆರ್ಥಿಕ ನೆರವು ಒಂದು ಕಡೆ ಇದ್ದರೆ, ದಿನನಿತ್ಯದ ಖರ್ಚುಗಳ ಹೆಚ್ಚಳ ಮತ್ತೊಂದು ಕಡೆ ಜನರನ್ನು ಕಾಡುತ್ತಿದೆ.



ಗ್ಯಾರಂಟಿ ಯೋಜನೆಗಳ ಅನುಷ್ಠಾನದ ನಡುವೆ ಸಾಲುಸಾಲು ದರ ಏರಿಕೆ - ಕುಟುಂಬಗಳ ಮಾಸಿಕ ಬಜೆಟ್‌ಗೆ ಹೊಡೆತ, ಜನಪರ ಆಡಳಿತದ ಬಗ್ಗೆ ಸಾರ್ವಜನಿಕ ವಲಯದಲ್ಲಿ ಚರ್ಚೆ

● ಹಾಲಿನ ದರ ಏರಿಕೆ :ಹೋಟೆಲ್‌ಗಳಲ್ಲೂ ಬಿಸಿ

ಇತ್ತೀಚೆಗಷ್ಟೇ ನಂದಿನಿ ಹಾಲು ಮತ್ತು ಮೊಸರಿನ ದರ ಹೆಚ್ಚಳವಾಗಿದ್ದು, ಗ್ರಾಹಕರಿಗೆ ಹೆಚ್ಚುವರಿ ಹೊರೆ ಬಿದ್ದಿದೆ. ಲೀಟರ್‌ಗೆ ರೂ.8ರಷ್ಟು ಹೆಚ್ಚಳ ಎಂದು ಸರ್ಕಾರ ತಿಳಿಸಿದ್ದರೂ, ಗ್ರಾಹಕರಿಗೆ ಒಟ್ಟಾರೆ ಸುಮಾರು ರೂ.12ರಷ್ಟು ಹೆಚ್ಚುವರಿ ವೆಚ್ಚವಾಗುತ್ತಿದೆ ಎಂಬ ದೂರುಗಳು ಕೇಳಿಬಂದಿವೆ. ಹಾಲಿನ ದರ ಏರಿಕೆಯ ಪರಿಣಾಮ ಹೋಟೆಲ್‌ಗಳಲ್ಲಿಯೂ ಕಾಫಿ, ಟೀ ಬೆಲೆ ಹೆಚ್ಚಳವಾಗಿದೆ. ದಿನನಿತ್ಯ ಬೆಳಿಗಿನ ಉಪಾಹಾರಕ್ಕೆ ಹೋಟೆಲ್ ಅವಲಂಬಿಸುವ ಕಾರ್ಮಿಕರು, ನೌಕರರು ಹಾಗೂ ಸಾರ್ವಜನಿಕರ ಜೇಬಿಗೂ ಇದರ ಬಿಸಿ ತಟ್ಟಿದೆ.

● ಬಸ್ ದರ ಏರಿಕೆ:ನಿತ್ಯ ಪ್ರಯಾಣಿಕರಿಗೆ ಸಂಕಷ್ಟ : ಹಾಲಿನ ಬೆಲೆ ಏರಿಕೆಯ ಬೆನ್ನಲ್ಲೇ ಬಸ್ ಪ್ರಯಾಣ ದರವೂ ಹೆಚ್ಚಳವಾಗಿರುವುದು ಸಾರ್ವಜನಿಕರ ಅಸಮಾಧಾನಕ್ಕೆ ಕಾರಣವಾಗಿದೆ. ಉದ್ಯೋಗ, ಶಿಕ್ಷಣ, ವ್ಯಾಪಾರ ಹಾಗೂ ಇತರ ಕೆಲಸಗಳಿಗಾಗಿ ಪ್ರತಿದಿನ ಬಸ್‌ಗಳಲ್ಲಿ ಸಂಚರಿಸುವ ಸಾವಿರಾರು ಪ್ರಯಾಣಿಕರಿಗೆ ಹೆಚ್ಚುವರಿ ಪ್ರಯಾಣ ವೆಚ್ಚ ಅನಿವಾರ್ಯವಾಗಿದೆ. ಮಹಿಳೆಯರಿಗೆ ಉಚಿತ ಬಸ್ ಪ್ರಯಾಣದ ಸೌಲಭ್ಯ ಮುಂದುವರಿದಿದ್ದರೂ, ಪುರುಷರು, ವಿದ್ಯಾರ್ಥಿಗಳು ಮತ್ತು ಇತರ ಪ್ರಯಾಣಿಕರು ದರ ಏರಿಕೆಯ ಪರಿಣಾಮ ಎದುರಿಸುವಂತಾಗಿದೆ.

● ಆಸ್ತಿ ಖರೀದಿಗೂ ದುಬಾರಿ ಹೊಡೆತ

ಇಷ್ಟೆಲ್ಲದರ ನಡುವೆ ಇದೀಗ ಆಸ್ತಿ ನೋಂದಣಿ ಮಾರ್ಗಸೂಚಿ ಮೌಲ್ಯ ಹೆಚ್ಚಳದ ವಿಚಾರವೂ ಮುನ್ನೆಲೆಗೆ ಬಂದಿದೆ. ರಾಜ್ಯದ ವಿವಿಧ ಉಪನೋಂದಣಾಧಿಕಾರಿ ಕಚೇರಿಗಳ ವ್ಯಾಪ್ತಿಯಲ್ಲಿ ಆಸ್ತಿಗಳ ಮಾರ್ಗಸೂಚಿ ಮೌಲ್ಯ ಪರಿಶೀಲನೆ ಕಾರ್ಯ ನಡೆಯುತ್ತಿದೆ. ಪರಿಷ್ಕರಣೆ ಜಾರಿಯಾದಲ್ಲಿ ಮನೆ, ನಿವೇಶನ ಹಾಗೂ ಕೃಷಿ ಜಮೀನುಗಳ ಖರೀದಿ ಮತ್ತು ನೋಂದಣಿ ಸಂದರ್ಭದಲ್ಲಿ ಪಾವತಿಸಬೇಕಾದ ಮುದ್ರಾಂಕ ಶುಲ್ಕ ಹಾಗೂ ನೋಂದಣಿ ವೆಚ್ಚವೂ ಹೆಚ್ಚಾಗುವ ಸಾಧ್ಯತೆಯಿದೆ. ಈಗಾಗಲೇ ಮನೆ ಕಟ್ಟುವ ಕನಸು ಕಾಣುತ್ತಿರುವ ಮಧ್ಯಮ ವರ್ಗದವರು ಹಾಗೂ ನಿವೇಶನ ಖರೀದಿಸಲು ಉಳಿತಾಯ ಮಾಡುತ್ತಿರುವ ಕುಟುಂಬಗಳಿಗೆ ಇದು ಮತ್ತೊಂದು ಆತಂಕವಾಗಿ ಪರಿಣಮಿಸಿದೆ.

● ಗ್ಯಾರಂಟಿ ಮತ್ತು ಅಭಿವೃದ್ಧಿ ಎರಡಕ್ಕೂ ಸಮತೋಲನ ಬೇಕು

ಗ್ಯಾರಂಟಿ ಯೋಜನೆಗಳ ಅನುಷ್ಠಾನಕ್ಕೆ ಸರ್ಕಾರ ದೊಡ್ಡ ಪ್ರಮಾಣದ ಅನುದಾನ ಮೀಸಲಿಡುತ್ತಿದೆ. ಅದೇ ಸಂದರ್ಭದಲ್ಲಿ ರಸ್ತೆ, ಕುಡಿಯುವ ನೀರು, ಶಿಕ್ಷಣ, ಆರೋಗ್ಯ ಸೇರಿದಂತೆ ಮೂಲಸೌಕರ್ಯ ಅಭಿವೃದ್ಧಿಗೂ ಸಮರ್ಪಕ ಅನುದಾನ ಒದಗಿಸಬೇಕೆಂಬ ಬೇಡಿಕೆ ಇದೆ. ಗ್ಯಾರಂಟಿ ಯೋಜನೆಗಳಿಂದ ಜನರಿಗೆ ದೊರೆಯುವ ನೆರವು ಬೆಲೆ ಏರಿಕೆಯಿಂದ ಕರಗಿಹೋಗಬಾರದು ಎಂಬುದು ಸಾರ್ವಜನಿಕರ ಅಭಿಪ್ರಾಯವಾಗಿದೆ.ಒಂದೆಡೆ ಹಾಲು, ಮೊಸರು ಸೇರಿದಂತೆ ಅಗತ್ಯ ವಸ್ತುಗಳ ಬೆಲೆ ಏರಿಕೆ, ಮತ್ತೊಂದೆಡೆ ಬಸ್ ಪ್ರಯಾಣ ವೆಚ್ಚದ ಹೆಚ್ಚಳ, ಇದರ ಬೆನ್ನಲ್ಲೇ ಆಸ್ತಿ ನೋಂದಣಿ ವೆಚ್ಚ ಹೆಚ್ಚಳದ ಆತಂಕ... ಹೀಗೆ ಜನಸಾಮಾನ್ಯರ ಆದಾಯಕ್ಕಿಂತ ಖರ್ಚಿನ ಪ್ರಮಾಣ ಹೆಚ್ಚಾಗುತ್ತಿರುವ ಪರಿಸ್ಥಿತಿ ನಿರ್ಮಾಣವಾಗುತ್ತಿದೆ. ಗ್ಯಾರಂಟಿ ಯೋಜನೆಗಳ ಲಾಭ ಜನರಿಗೆ ತಲುಪುವುದು ಎಷ್ಟು ಮುಖ್ಯವೋ, ಬೆಲೆ ಏರಿಕೆಯ ಹೊಡೆತದಿಂದ ಅವರ ಕುಟುಂಬದ ಆರ್ಥಿಕ ಸ್ಥಿತಿ ಕುಸಿಯದಂತೆ ನೋಡಿಕೊಳ್ಳುವುದೂ ಅಷ್ಟೇ ಮುಖ್ಯ. ಜನರ ಜೇಬಿಗೆ ಹೊರೆಯಾಗದ ಆಡಳಿತ ವ್ಯವಸ್ಥೆ ರೂಪಿಸುವುದು ಸರ್ಕಾರದ ಮುಂದಿರುವ ಪ್ರಮುಖ ಸವಾಲಾಗಿದೆ.

ಸರ್ಕಾರದ ಗ್ಯಾರಂಟಿ ಯೋಜನೆಗಳು ಬಡವರಿಗೆ ನೆರವಾಗುತ್ತಿರುವುದು ಸ್ವಾಗತಾರ್ಹ. ಆದರೆ ಯೋಜನೆಗಳ ಅನುಷ್ಠಾನದ ಜತೆಗೆ ಅಗತ್ಯ ವಸ್ತುಗಳ ಬೆಲೆ ಏರಿಕೆಯಾಗದಂತೆ ನೋಡಿಕೊಳ್ಳಬೇಕು. ಜನರಿಗೆ ಸಿಗುವ ಸೌಲಭ್ಯಗಳು ಬೆಲೆ ಏರಿಕೆಯಲ್ಲಿ ಕರಗಿ ಹೋಗಬಾರದು.



–ಬಳ್ಳೂರು ಸ್ವಾಮಿಗೌಡ, ಪ್ರಧಾನ ಕಾರ್ಯದರ್ಶಿ ರೈತ ಸಂಘ ಹಾಸನ.

ಸರ್ಕಾರ ನೀಡುವ ಗ್ಯಾರಂಟಿ ಹಣ ಒಂದು ಕಡೆಯಾದರೆ, ಮತ್ತೊಂದೆಡೆ ದಿನನಿತ್ಯದ ಖರ್ಚುಗಳು ಹೆಚ್ಚುತ್ತಿವೆ. ಹಾಲು, ದಿನಸಿ, ಪ್ರಯಾಣ ಎಲ್ಲದಕ್ಕೂ ಹಣ ಹೊಂದಿಸಬೇಕಾಗಿದೆ. ಆದಾಯ ಮಾತ್ರ ಹೆಚ್ಚಾಗುತ್ತಿಲ್ಲ. ಬೆಲೆ ಏರಿಕೆಗೆ ಕಡಿವಾಣ ಹಾಕದಿದ್ದರೆ ಸಾಮಾನ್ಯ ಕುಟುಂಬಗಳ ಬದುಕು ಕಷ್ಟವಾಗಲಿದೆ.



–ಸಂಜಯ್ ಕೌರಿ, ಅಧ್ಯಕ್ಷರು, ಬಿ.ಜೆ.ಪಿ ಬೇಲೂರು.

ಒಂದು ಕೈಯಲ್ಲಿ ಗ್ಯಾರಂಟಿ, ಮತ್ತೊಂದು ಕೈಯಲ್ಲಿ ಬೆಲೆ ಏರಿಕೆಯ ಬರೆ. ಹಾಲು, ಮೊಸರು, ಬಸ್ ಪ್ರಯಾಣ ದರ ಏರಿಕೆ ಬೆನ್ನಲ್ಲೇ ಆಸ್ತಿ ನೋಂದಣಿ ವೆಚ್ಚ ಹೆಚ್ಚಳದ ಆತಂಕ. 2,000 ಕೊಟ್ಟು ಸಾವಿರಾರು ರೂಪಾಯಿ ಹೊರೆ ಹಾಕುವುದೇ ಜನಪರ ಆಡಳಿತ, ಗ್ಯಾರಂಟಿ ಹಣ ಕೊಟ್ಟರೆ ಸಾಲದು, ಜನರ ಬದುಕಿನ ಖರ್ಚಿಗೂ ಕಡಿವಾಣ ಹಾಕಲಿ ಸರ್ಕಾರ



– ವೇದಾವತಿ, ಬಿಜೆಪಿ ಮುಖಂಡರು ಹಾಸನ



– ಬಿ.ಬಿ ಶಿವರಾಜು, ಅಧ್ಯಕ್ಷರು ರೋಟರಿ ಸಂಸ್ಥೆ ಬೇಲೂರು

ಬಸ್ ದರ ಏರಿಕೆ ಹಿಂಪಡೆಯಲಿ: ಶಾಸಕ ಸ್ವರೂಪ್‌ಪ್ರಕಾಶ್ ಆಗ್ರಹ

ಪ್ರಜಾ ಭಾರತ ವರದಿ

ಹಾಸನ: ರಾಜ್ಯ ಸರ್ಕಾರ ಸಾರಿಗೆ ಬಸ್‌ಗಳ ಪ್ರಯಾಣ ದರ ಏರಿಕೆ ಮಾಡಿರುವುದು ಜನ ಸಾಮಾನ್ಯರಿಗೆ ಹೊರೆಯಾಗಿದ್ದು, ಕೂಡಲೇ ದರ ಏರಿಕೆ ನಿರ್ಧಾರವನ್ನು ಹಿಂಪಡೆಯಬೇಕು ಎಂದು ಶಾಸಕ ಎಚ್.ಪಿ. ಸ್ವರೂಪ್ ಪ್ರಕಾಶ್ ಆಗ್ರಹಿಸಿದರು.

ನಗರದಲ್ಲಿ ಹಾಸನಾಂಬೆ ಹಾಗೂ ಸಿದ್ದೇಶ್ವರ ಸ್ವಾಮಿ ದರ್ಶನ ಪಡೆದ ಬಳಿಕ ಮಾತನಾಡಿದ ಅವರು, ಗ್ರಾಮೀಣ ಭಾಗಗಳಲ್ಲಿ ಬಸ್ ಸಂಚಾರ ಕಡಿತಗೊಂಡಿರುವುದರಿಂದ ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರು ತೊಂದರೆ ಅನುಭವಿಸುತ್ತಿದ್ದಾರೆ. ಸಮರ್ಪಕ ಬಸ್ ವ್ಯವಸ್ಥೆ ಕಲ್ಪಿಸದೆ ಪ್ರಯಾಣ ದರ ಹೆಚ್ಚಿಸಿರುವುದು ಸರಿಯಲ್ಲ ಎಂದು ಟೀಕಿಸಿದರು.

ಸಾರಿಗೆ ಇಲಾಖೆಗೆ ಸರ್ಕಾರದಿಂದ ಸುಮಾರು ರೂ.2 ಸಾವಿರ ಕೋಟಿ ಬಾಕಿ ಇದ್ದು, ಸಿಬ್ಬಂದಿ ವೇತನ, ಡೀಸೆಲ್ ಹಾಗೂ ಬಸ್ ನಿರ್ವಹಣೆಗೂ ಸಮಸ್ಯೆ ಎದುರಾಗಿದೆ. ಇಲಾಖೆಯ ಆರ್ಥಿಕ ಸಮಸ್ಯೆ ಪರಿಹರಿಸುವ ಬದಲು ಪ್ರಯಾಣಿಕರ ಮೇಲೆ ಹೊರೆ ಹಾಕುವುದು ಖಂಡನೀಯ. ಸರ್ಕಾರ ದರ ಏರಿಕೆ ಹಿಂಪಡೆಯದಿದ್ದರೆ ಬೆಳಗಾವಿ ಅಧಿವೇಶನದಲ್ಲಿ ಹೋರಾಟ ನಡೆಸಲಾಗುವುದು ಎಂದು ಎಚ್ಚರಿಸಿದರು.

ಹಾಸನಾಂಬೆ ದರ್ಶನಕ್ಕೆ ಪ್ರತಿವರ್ಷ ಭಕ್ತರ ಸಂಖ್ಯೆ ಹೆಚ್ಚುತ್ತಿದ್ದು, ಮುಂದಿನ ವರ್ಷಗಳಲ್ಲಿ ದಟ್ಟಣೆ ನಿಯಂತ್ರಿಸಲು ನಗರಸಭೆ ಪ್ರದರ್ಶನ ಮೈದಾನ ಹಾಗೂ ಎಕ್ಸಿಬಿಷನ್ ಹಾಲ್‌ಗಳನ್ನು ಬಳಸಿಕೊಂಡು 30ರಿಂದ 40 ಸಾವಿರ ಭಕ್ತರಿಗೆ ತಾತ್ಕಾಲಿಕ ವಸತಿ ಮತ್ತು ವಿಶ್ರಾಂತಿ ವ್ಯವಸ್ಥೆ ಕಲ್ಪಿಸಬಹುದು. ಈ ಕುರಿತು ಜಿಲ್ಲಾಡಳಿತದೊಂದಿಗೆ ಚರ್ಚಿಸಲಾಗುವುದು ಎಂದರು. ಹಾಸನ ಜಿಲ್ಲೆಯ ಅಭಿವೃದ್ಧಿಗೆ ಮಾಜಿ ಸಚಿವ ಎಚ್.ಡಿ. ರೇವಣ್ಣ ಅವರ ಕೊಡುಗೆ ಅಪಾರವಾಗಿದ್ದು, ಅವರ ಅನುಭವ ಮತ್ತು ಸಲಹೆಗಳನ್ನು ಸರ್ಕಾರ ಪರಿಗಣಿಸಬೇಕು. ಹಾಸನಾಂಬೆ ಉತ್ಸವದಲ್ಲಿ ಸಾಮಾನ್ಯ ಭಕ್ತರಿಗೆ ಯಾವುದೇ ತೊಂದರೆಯಾಗದಂತೆ ದರ್ಶನ ವ್ಯವಸ್ಥೆಗೆ ಆದ್ಯತೆ ನೀಡಬೇಕು ಎಂದು ಹೇಳಿದರು.

120 ನಿವೇಶನದ ಫಲಾನುಭವಿಗಳಿಗೆ ತಪ್ಪದ ಸಂಕಷ್ಟ



ಪ್ರಜಾ ಭಾರತ ವರದಿ

ಸಕಲೇಶಪುರ: ತಾಲೂಕಿನ ಬಾಗೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಚಿಕ್ಕಕಾಡು ಗ್ರಾಮದಲ್ಲಿ 2012–13ನೇ ಸಾಲಿನಲ್ಲಿ 120 ನಿವೇಶನಗಳನ್ನು ಹಂಚಿಕೆ ಮಾಡಿ ಹಕ್ಕುಪತ್ರ ವಿತರಿಸಿದ್ದರೂ, ಇಂದಿಗೂ ಅಗತ್ಯ ಮೂಲಸೌಕರ್ಯ ಕಲ್ಪಿಸದಿರುವುದರಿಂದ ಫಲಾನುಭವಿಗಳು ಸಂಕಷ್ಟ ಅನುಭವಿಸುತ್ತಿದ್ದಾರೆ ಎಂದು ಕರ್ನಾಟಕ ರಕ್ಷಣಾ ವೇದಿಕೆ (ಪ್ರವೀಣ್ ಶೆಟ್ಟಿ ಬಣ) ಆರೋಪಿಸಿದೆ.

ನಿವೇಶನ ಪ್ರದೇಶಕ್ಕೆ ನೀರು ಮತ್ತು ವಿದ್ಯುತ್ ಸಂಪರ್ಕ ಕಲ್ಪಿಸಲಾಗಿದ್ದರೂ ರಸ್ತೆ ಹಾಗೂ ಚರಂಡಿ ನಿರ್ಮಾಣವಾಗಿಲ್ಲ.

ಮತ್ತೊಂದೆಡೆ, 32 ನಿವೇಶನಗಳನ್ನು ಆರ್‌ಟಿಒ ಮತ್ತು ಐಟಿಐ ಸಂಸ್ಥೆಗಳ ನಿರ್ಮಾಣಕ್ಕಾಗಿ ಪಡೆದುಕೊಳ್ಳಲಾಗಿದ್ದು, ನಿವೇಶನ ಕಳೆದುಕೊಂಡ ಬಡ ಫಲಾನುಭವಿಗಳಿಗೆ ಪರ್ಯಾಯ ನಿವೇಶನ ನೀಡುವ ಭರವಸೆ ಈಡೇರಿಲ್ಲ.

ವರ್ಷಗಳು ಕಳೆದರೂ ಸಮಸ್ಯೆ ಬಗೆಹರಿಯದಿರುವುದು ಅಧಿಕಾರಿಗಳ ನಿರ್ಲಕ್ಷ್ಯಕ್ಕೆ ಸಾಕ್ಷಿಯಾಗಿದೆ. ಜಿಲ್ಲಾಧಿಕಾರಿಗಳು ಕೂಡಲೇ ಮಧ್ಯಪ್ರವೇಶಿಸಿ ನಿವೇಶನ ಕಳೆದುಕೊಂಡ 32 ಕುಟುಂಬಗಳಿಗೆ ಪರ್ಯಾಯ ನಿವೇಶನ ಒದಗಿಸಬೇಕು.

ಜೊತೆಗೆ ಬಾಕಿ ಇರುವ ರಸ್ತೆ, ಚರಂಡಿ ಸೇರಿದಂತೆ ಅಗತ್ಯ ಮೂಲಸೌಕರ್ಯಗಳನ್ನು ಕಲ್ಪಿಸಬೇಕು ಎಂದು ಕ.ರ.ವೇ ಪ್ರವೀಣ್ ಶೆಟ್ಟಿ ಬಣದ ತಾಲೂಕು ಅಧ್ಯಕ್ಷ ರಮೇಶ್ ಪೂಜಾರಿ ಹಾಗೂ ಪದಾಧಿಕಾರಿಗಳು ಆಗ್ರಹಿಸಿದ್ದಾರೆ.

ಪ್ರಜಾ ಭಾರತ

ಶುಭ ನುಡಿ

" ತೆರೆದ ಮನಸ್ಸಿನಿಂದ ಎಲ್ಲವನ್ನೂ ಕೇಳಿಸಿಕೊಳ್ಳಬೇಕು , ನಮಗೆ ಅಗತ್ಯವೆನಿಸಿದ್ದನ್ನು ಮಾತ್ರ ಉಳಿಸಿಕೊಳ್ಳಬೇಕು. "

ರಾಜ್ಯ ಸರ್ಕಾರಿ ನೌಕರರಿಗೆ ದೀಪಾವಳಿ ಗಿಫ್ಟ್: ತುಟ್ಟಿಭತ್ಯೆ ಶೇ. 18ಕ್ಕೆ ಹೆಚ್ಚಿಸಿ ಆದೇಶ

ಬೆಂಗಳೂರು: ರಾಜ್ಯ ಸರ್ಕಾರ ದೀಪಾವಳಿ ಹಬ್ಬಕ್ಕೂ ಮುನ್ನವೇ ತನ್ನ ನೌಕರರಿಗೆ ಭರ್ಜರಿ ಗಿಫ್ಟ್ ನೀಡಿದ್ದು, ತುಟ್ಟಿಭತ್ಯೆ (DA)ಯನ್ನು ಶೇಕಡಾ 2.25 ರಷ್ಟು ಹೆಚ್ಚಿಸಿ ಗುರುವಾರ ಆದೇಶ ಹೊರಡಿಸಿದೆ.

ರಾಜ್ಯ ಸರ್ಕಾರಿ ನೌಕರರ ತುಟ್ಟಿಭತ್ಯೆಯನ್ನು ಶೇ. 15. 75 ರಿಂದ ಶೇ. 18ಕ್ಕೆ ಹೆಚ್ಚಿಸಿ ಆದೇಶ ಹೊರಡಿಸಲಾಗಿದ್ದು, ಪರಿಷ್ಕೃತ ತುಟ್ಟಿಭತ್ಯೆಯು 2026ರ ಜುಲೈ 1ರಿಂದಲೇ ಪೂರ್ವಾನ್ವಯವಾಗಿ ಜಾರಿಗೆ ಬರಲಿದೆ.

ಬೆಲೆ ಏರಿಕೆಯ ಬಿಸಿ ಜನಸಾಮಾನ್ಯರಿಗೆ ತಟ್ಟುತ್ತಿದೆ : ಸರ್ಕಾರದ ವಿರುದ್ಧ ಶಾಸಕ ಸಿಮೆಂಟ್ ಮಂಜು ಆಕ್ರೋಶ

ಪ್ರಜಾ ಭಾರತ ವರದಿ



ಸಕಲೇಶಪುರ: ರಾಜ್ಯದಲ್ಲಿ ಒಂದರ ಹಿಂದೆ ಒಂದರಂತೆ ಅಗತ್ಯ ವಸ್ತುಗಳು ಹಾಗೂ ಸೇವೆಗಳ ದರ ಏರಿಕೆಯಾಗುತ್ತಿರುವುದರಿಂದ ಬಡ ಮತ್ತು ಮಧ್ಯಮ ವರ್ಗದ ಕುಟುಂಬಗಳ ಜೀವನ ನಿರ್ವಹಣೆ ಕಷ್ಟಕರವಾಗಿದೆ ಎಂದು ಶಾಸಕ ಸಿಮೆಂಟ್ ಮಂಜು ರಾಜ್ಯ ಕಾಂಗ್ರೆಸ್ ಸರ್ಕಾರದ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದರು.

ರಾಜ್ಯ ಸರ್ಕಾರದ ಬೆಲೆ ಏರಿಕೆ ನೀತಿಯನ್ನು ವಿರೋಧಿಸಿ ಸಕಲೇಶಪುರ ತಾಲೂಕು ಬಿಜೆಪಿ ಮಂಡಲದ ವತಿಯಿಂದ ಆಯೋಜಿಸಿದ್ದ ಪ್ರತಿಭಟನೆಯಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಕೆಎಸ್ಆರ್‌ಟಿಸಿ ಬಸ್ ಪ್ರಯಾಣ ದರ ಹೆಚ್ಚಳದಿಂದ ಪ್ರತಿನಿತ್ಯ ಪ್ರಯಾಣಿಸುವ ಸಾರ್ವಜನಿಕ–ರಿಗೆ ಆರ್ಥಿಕ ಹೊರೆ ಹೆಚ್ಚಾಗಿದೆ. ಸಕಲೇಶಪುರದಿಂದ ಬೆಂಗಳೂರಿಗೆ ತೆರಳಿ ಮರಳಲು ಪ್ರಯಾಣಿಕರು ಹೆಚ್ಚುವರಿ ಹಣ ವ್ಯಯಿಸಬೇಕಾದ ಪರಿಸ್ಥಿತಿ ಎದುರಾಗಿದೆ. ಹಾಲಿನ ದರ ಏರಿಕೆಯೂ ಸಾಮಾನ್ಯ ಕುಟುಂಬಗಳ ದಿನನಿತ್ಯದ ಖರ್ಚಿನ ಮೇಲೆ ಪರಿಣಾಮ ಬೀರಿದೆ ಎಂದು ಹೇಳಿದರು.

ಮಕ್ಕಳಿಗೆ ಹಾಲು ಕೊಡಿಸುವುದರಿಂದ ಹಿಡಿದು ದಿನನಿತ್ಯದ ಅಡುಗೆಗೆ ಅಗತ್ಯವಿರುವ ಅಕ್ಕಿ, ಬೇಳೆ ಸೇರಿದಂತೆ ವಸ್ತುಗಳನ್ನು ಖರೀದಿಸುವವರೆಗೆ ಪ್ರತಿಯೊಂದು ಹಂತದಲ್ಲೂ ಜನರು ಬೆಲೆ ಏರಿಕೆಯ ಬಿಸಿ ಅನುಭವಿಸುತ್ತಿದ್ದಾರೆ. ಮತ್ತೊಂದೆಡೆ, ರೈತರಿಗೆ ಪ್ರತಿ ಲೀಟರ್ ಹಾಲಿಗೆ ರೂ.7 ಪ್ರೋತ್ಸಾಹಧನ ನೀಡುವ ಭರವಸೆ ಈಡೇರಿಸುವಲ್ಲಿ ಸರ್ಕಾರ ವಿಫಲವಾಗಿದೆ. ಹಾಲು ಉತ್ಪಾದಕರಿಗೆ ಬರಬೇಕಾದ ಬಾಕಿ ಹಣವನ್ನು ಕೂಡಲೇ ಬಿಡುಗಡೆ ಮಾಡಬೇಕು ಎಂದು ಆಗ್ರಹಿಸಿದರು.

ಮಹಿಳೆಯರಿಗೆ ಉಚಿತ ಬಸ್ ಪ್ರಯಾಣ ಕಲ್ಪಿಸುವ ಶಕ್ತಿ ಯೋಜನೆಯ ಆರ್ಥಿಕ ಹೊರೆಯನ್ನು ಇತರ ಪ್ರಯಾಣಿಕರ ಮೇಲೆ ವರ್ಗಾಯಿಸುವುದು ಸರಿಯಲ್ಲ ಎಂಬ ಅಭಿಪ್ರಾಯ ವ್ಯಕ್ತಪಡಿಸಿದ ಅವರು, ಸರ್ಕಾರ ಎಲ್ಲಾ ವರ್ಗದ ಜನರ ಹಿತವನ್ನು ಗಮನದಲ್ಲಿಟ್ಟುಕೊಂಡು ನಿರ್ಧಾರ ಕೈಗೊಳ್ಳಬೇಕು ಎಂದರು.

ಬೆಲೆ ಏರಿಕೆಯಿಂದ ಬಡವರು, ದಲಿತರು, ಹಿಂದುಳಿದವರು, ಮಹಿಳೆಯರು ಹಾಗೂ ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಜನರ ಬದುಕಿಗೆ ಹೊರೆಯಾಗಿರುವ ಹಾಲು ಮತ್ತು ಬಸ್ ಪ್ರಯಾಣ ದರ ಏರಿಕೆಯನ್ನು ಕೂಡಲೇ ಹಿಂಪಡೆದು ಹಿಂದಿನ ದರಗಳನ್ನು ಮುಂದುವ–ರಿಸಬೇಕು.

ಸರ್ಕಾರ ಜನರ ಬೇಡಿಕೆಗೆ ಸ್ಪಂದಿಸದಿದ್ದರೆ ಬಿಜೆಪಿ ವತಿಯಿಂದ ಹೋರಾಟವನ್ನು ಮತ್ತಷ್ಟು ತೀವ್ರಗೊಳಿಸಲಾಗುವುದು ಎಂದು ಶಾಸಕ ಸಿಮೆಂಟ್ ಮಂಜು ಎಚ್ಚ–ರಿಸಿದರು.

"ಜನಸಾಮಾನ್ಯರ ಬದುಕಿನ ಸಂಕಷ್ಟವನ್ನು ಸರ್ಕಾರ ಅರ್ಥ ಮಾಡಿಕೊಳ್ಳಬೇಕು. ಬೆಲೆ ಏರಿಕೆಯ ಮೂಲಕ ಬಡವರ ಮೇಲೆ ಹೆಚ್ಚುವರಿ ಹೊರೆ ಹಾಕುವುದನ್ನು ನಿಲ್ಲಿಸಬೇಕು" ಎಂದು ಅವರು ಒತ್ತಾಯಿಸಿದರು.

ವಿದ್ಯಾರ್ಥಿಗಳಲ್ಲಿ ಮಾನಸಿಕ ಆರೋಗ್ಯ, ಏಕಾಗ್ರತೆ ಮುಖ್ಯ: ರಘು



ಪ್ರಜಾ ಭಾರತ ವರದಿ

ಬೇಲೂರು: ವಿದ್ಯಾರ್ಥಿಗಳು ಶೈಕ್ಷಣಿಕ ಗುರಿ ಸಾಧಿಸಲು ಏಕಾಗ್ರತೆ, ತಾಳ್ಮೆ ಹಾಗೂ ಉತ್ತಮ ಮಾನಸಿಕ ಆರೋಗ್ಯ ಕಾಪಾಡಿಕೊಳ್ಳುವುದು ಅಗತ್ಯ ಎಂದು ಕಾಲೇಜು ಅಭಿವೃದ್ಧಿ ಸಮಿತಿ ಸದಸ್ಯ ಚಿಕ್ಕೋಲೆ ರಘು ತಿಳಿಸಿದರು.

ಪಟ್ಟಣದ ವೈ.ಡಿ.ಡಿ. ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಮಾನಸಿಕ ಆರೋಗ್ಯ ಸಂರಕ್ಷಣಾ ಸಮಿತಿ, ಐ.ಕ್ಯೂ.ಎ.ಸಿ. ಹಾಗೂ ಹಾಸನ ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮದ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ ಮಾನಸಿಕ ಆರೋಗ್ಯ ಜಾಗೃತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಮೊಬೈಲ್ ಬಳಕೆ, ಸಾಮಾಜಿಕ ಜಾಲತಾಣಗಳ ಆಕರ್ಷಣೆ ಹಾಗೂ ಕೌಟುಂಬಿಕ ಸಮಸ್ಯೆಗಳಿಂದ ವಿದ್ಯಾರ್ಥಿಗಳ ಏಕಾಗ್ರತೆ ಕುಂಠಿತವಾಗುತ್ತಿದೆ. ಆದ್ದರಿಂದ ಮೊಬೈಲ್ ಬಳಕೆಯನ್ನು ಮಿತಿಗೊಳಿಸಿ, ಓದು, ಕ್ರೀಡೆ ಹಾಗೂ ಸಾಂಸ್ಕೃತಿಕ ಚಟುವಟಿಕೆಗಳಿಗೆ ಆದ್ಯತೆ ನೀಡಬೇಕು ಎಂದರು.

ಜಿಲ್ಲಾ ಮಾನಸಿಕ ಆರೋಗ್ಯ ತಜ್ಞ ಡಾ. ಕಾರ್ತಿಕ್ ಮಾತನಾಡಿ, ಮಾನಸಿಕ ಸಮಸ್ಯೆಗಳನ್ನು ಮುಚ್ಚಿಡದೆ ಆರಂಭದಲ್ಲಿಯೇ ತಜ್ಞರಿಂದ ಸಲಹೆ ಮತ್ತು ಚಿಕಿತ್ಸೆ ಪಡೆಯಬೇಕು. ಟೆಲಿ ಮಾನಸ್ ಉಚಿತ ಸೇವೆಯ 14416 ಸಹಾಯವಾಣಿಗೆ ಕರೆ ಮಾಡಿ ದಿನದ 24 ಗಂಟೆಯೂ ಸಮಾಲೋಚನೆ ಪಡೆಯಬಹುದು ಎಂದು ತಿಳಿಸಿದರು.

ಉಪನ್ಯಾಸಕ ವೀರಭದ್ರಪ್ಪ ಪ್ರಾಸ್ತಾವಿಕವಾಗಿ ಮಾತನಾಡಿದರು. ಪ್ರಾಂಶುಪಾಲ ನಾಗೇಂದ್ರಪ್ಪ ಅಧ್ಯಕ್ಷತೆ ವಹಿಸಿದ್ದರು. ಉಪನ್ಯಾಸಕರಾದ ದೇವರಾಜ್, ಮರಿಯಾ ಪಿಂಟೋ, ಐ.ಕ್ಯೂ.ಎ.ಸಿ. ಸಂಚಾಲಕ ಡಾ. ಮಧು, ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಸರ್ಕಾರಿ ಶಾಲೆಗಳ ಖಾಸಗೀಕರಣ ವಿರೋಧಿಸಿ ಎಐಡಿಎಸ್‌ಓ ಪ್ರತಿಭಟನೆ

ಪ್ರಜಾ ಭಾರತ ವರದಿ



ಹಾಸನ: ಸರ್ಕಾರಿ ಶಾಲೆಗಳನ್ನು ಖಾಸಗಿ ಸಂಸ್ಥೆಗಳಿಗೆ ಹಸ್ತಾಂತ–ರಿಸುವ ಕೆಪಿಎಸ್–ಮ್ಯಾಗ್ನೆಟ್ ನೀತಿ ಹಾಗೂ ಏಷ್ಯನ್ ಡೆವಲಪ್‌ಮೆಂಟ್ ಬ್ಯಾಂಕ್ (ಎಡಿಬಿ) ಸಾಲದ ಒಪ್ಪಂದವನ್ನು ಖಂಡಿಸಿ ಎಐಡಿಎಸ್‌ಓ ಹಾಸನ ಜಿಲ್ಲಾ ಕೌನ್ಸಿಲ್ ವತಿಯಿಂದ ಗುರುವಾರ ನಗರದ ಹೇಮಾವತಿ ಪ್ರತಿಮೆ ಮುಂಭಾಗ ಪ್ರತಿಭಟನೆ ನಡೆಸಲಾಯಿತು.

ಪ್ರತಿಭಟನೆಯ ನೇತೃತ್ವ ವಹಿಸಿದ್ದ ಜಿಲ್ಲಾ ಅಧ್ಯಕ್ಷೆ ಚೈತ್ರ ಮಾತನಾಡಿ, ರಾಜ್ಯದ ಸುಮಾರು 45 ಸಾವಿರ ಸರ್ಕಾರಿ ಶಾಲೆಗಳ ಭವಿಷ್ಯವನ್ನು ಸರ್ಕಾರದ ನೀತಿಗಳು ಅಪಾಯಕ್ಕೆ ತಳ್ಳುತ್ತಿವೆ. ಮೊದಲ ಹಂತದಲ್ಲಿ 2 ಸಾವಿರ ಸರ್ಕಾರಿ ಶಾಲೆಗಳನ್ನು ಖಾಸಗಿ ಸಂಸ್ಥೆಗಳಿಗೆ ದತ್ತು ನೀಡುವ ಪ್ರಸ್ತಾವನೆ ಸಾರ್ವಜನಿಕ ಶಿಕ್ಷಣ ವ್ಯವಸ್ಥೆಯ ಖಾಸಗೀಕರಣ–ಕ್ಕೆ ದಾರಿ ಮಾಡಿಕೊಡಲಿದೆ ಎಂದು ಆರೋಪಿಸಿದರು.ಸರ್ಕಾರಿ ಶಾಲೆಗಳಲ್ಲಿ ಶಿಕ್ಷಕರ ಕೊರತೆ, ಮೂಲಸೌಕರ್ಯಗಳ ಅಭಾವ ಸೇ–ರಿದಂತೆ ಹಲವು ಸಮಸ್ಯೆಗಳಿದ್ದು, ಅವುಗಳನ್ನು ಪರಿಹರಿಸುವ ಬದಲು ಖಾಸಗಿ ಸಂಸ್ಥೆಗಳ ಹಸ್ತಕ್ಷೇಪಕ್ಕೆ ಸರ್ಕಾರ ಅವಕಾಶ ನೀಡುತ್ತಿದೆ. ಶಿಕ್ಷಣ ಪ್ರತಿಯೊಂದು ಮಗುವಿನ ಮೂಲಭೂತ ಹಕ್ಕಾಗಿದ್ದು, ಅದನ್ನು ವ್ಯಾಪಾರದ ವಸ್ತುವನ್ನಾಗಿಸಬಾರದು. ಕೆಪಿಎಸ್–ಮ್ಯಾಗ್ನೆಟ್ ನೀತಿಯನ್ನು ಹಿಂಪಡೆದು ಸರ್ಕಾರಿ ಶಾಲೆಗಳನ್ನು ಬಲಪಡಿಸಲು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ಜಿಲ್ಲಾ ಕಾರ್ಯದರ್ಶಿ ಸುಷ್ಮಾ, ಕಾರ್ಯಕರ್ತರಾದ ಪುರುಷೋ ತ್ತಮ್, ಪ್ರಾರ್ಥನಾ, ಧನಲಕ್ಷ್ಮಿ, ಶೃತಿ ಸೇರಿದಂತೆ ವಿದ್ಯಾರ್ಥಿಗಳು ಭಾಗವಹಿಸಿದ್ದರು.

ವಿಜಯೇಂದ್ರ ಜನ್ಮದಿನ : ಆಸ್ಪತ್ರೆ ರೋಗಿಗಳಿಗೆ ಹಣ್ಣು ಹಂಪಲು ವಿತರಣೆ



ಪ್ರಜಾ ಭಾರತ ವರದಿ

ಸಕಲೇಶಪುರ: ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವರ 51ನೇ ಜನ್ಮದಿನದ ಅಂಗವಾಗಿ ಬಿಜೆಪಿ ಸಕಲೇಶಪುರ ಮಂಡಲದ ವತಿಯಿಂದ ಪಟ್ಟಣದ ಸಾರ್ವಜನಿಕ ಕ್ರಾಫರ್ಡ್ ಆಸ್ಪತ್ರೆಯಲ್ಲಿ 170ಕ್ಕೂ ಹೆಚ್ಚು ರೋಗಿಗಳಿಗೆ ಹಣ್ಣು ಹಂಪಲು ವಿತರಿಸಲಾಯಿತು.

ಈ ಸಂದರ್ಭದಲ್ಲಿ ಶಾಸಕ ಸಿಮೆಂಟ್ ಮಂಜು ಮಾತನಾಡಿ, ವಿಜಯೇಂದ್ರ ಅವರು ರಾಜ್ಯಾಧ್ಯಕ್ಷರಾದ ಬಳಿಕ ಪಕ್ಷ ಸಂಘಟನೆಗೆ ಹೆಚ್ಚಿನ ಒತ್ತು ನೀಡಿದ್ದು, ರೈತರು, ದಲಿತರು ಹಾಗೂ ಹಿಂದುಳಿದ ವರ್ಗಗಳ ಪರವಾಗಿ ವಿವಿಧ ಹೋರಾಟಗಳ ಮೂಲಕ ಧ್ವನಿಯಾಗಿದ್ದಾರೆ. ಅವರ ಜನ್ಮದಿನವನ್ನು ಸೇವಾ ಕಾರ್ಯದ ಮೂಲಕ ಆಚರಿಸುತ್ತಿರುವುದು ಸಂತಸದ ಸಂಗತಿ ಎಂದರು.

ಬಿಜೆಪಿ ಮಂಡಲ ಅಧ್ಯಕ್ಷ ವಳಲಹಳ್ಳಿ ಅಶ್ವಥ್ ಮಾತನಾಡಿ, ಪಕ್ಷದ ಸಂಘಟನೆ ಹಾಗೂ ಜನಪರ ಸೇವಾ ಕಾರ್ಯಗಳ ಮೂಲಕ ವಿಜಯೇಂದ್ರ ಅವರ ಜನ್ಮದಿನವನ್ನು ಅರ್ಥಪೂರ್ಣವಾಗಿ ಆಚರಿಸಲಾಗುತ್ತಿದೆ ಎಂದರು.

ಕಾರ್ಯಕ್ರಮದಲ್ಲಿ ಮಂಡಲ ಪ್ರಧಾನ ಕಾರ್ಯದರ್ಶಿಗಳಾದ ಮೋಹನ್, ಅಗ್ನಿ ಸೋಮಶೇಖರ್, ಮುಖಂಡರಾದ ಜಯಪ್ರಕಾಶ್, ನವೀನ್ ಶೆಟ್ಟಿ, ನೇಮನ್ ಶೇಕ್ ಸೇರಿದಂತೆ ಪಕ್ಷದ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

ಹಾಸನಾಂಬೆ ದೇವಿ ದರ್ಶನ ಪಡೆದ ಅನಿತಾ ಕುಮಾರಸ್ವಾಮಿ



ಪ್ರಜಾ ಭಾರತ ವರದಿ

ಹಾಸನ: ನಗರದ ಅಧಿದೇವತೆ ಶ್ರೀ ಹಾಸನಾಂಬೆ ದೇವಿಯ ದರ್ಶನೋತ್ಸವದ ಹಿನ್ನೆಲೆಯಲ್ಲಿ ಗಣ್ಯರ ಭೇಟಿ ಮುಂದುವರಿದಿದ್ದು, ಮಾಜಿ ಮುಖ್ಯಮಂತ್ರಿ ಹಾಗೂ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರ ಧರ್ಮಪತ್ನಿ ಅನಿತಾ ಕುಮಾರಸ್ವಾಮಿ ಅವರು ಗುರುವಾರ ಹಾಸನಕ್ಕೆ ಭೇಟಿ ನೀಡಿ ದೇವಿಯ ದರ್ಶನ ಪಡೆದರು.

ದೇವಾಲಯಕ್ಕೆ ಆಗಮಿಸಿದ ಅವರು ಹಾಸನಾಂಬೆ ದೇವಿಗೆ ವಿಶೇಷ ಪೂಜೆ ಸಲ್ಲಿಸಿ ಪ್ರಾರ್ಥಿಸಿದರು. ಬಳಿಕ ದರ್ಬಾರ್ ಗಣಪತಿ ದೇವಾಲಯಕ್ಕೆ ತೆರಳಿ ಗಣಪತಿಗೆ ನಮನ ಸಲ್ಲಿಸಿದರು. ನಂತರ ಶ್ರೀ ಸಿದ್ದೇಶ್ವರ ಸ್ವಾಮಿಯ ಸನ್ನಿಧಿಯಲ್ಲಿ ವಿಶೇಷ ಪೂಜೆ ನೆರವೇರಿಸಿ ಆಶೀರ್ವಾದ ಪಡೆದರು.

ಈ ಸಂದರ್ಭದಲ್ಲಿ ಜೆಡಿಎಸ್ ಮುಖಂಡರು ಹಾಗೂ ಭಕ್ತರು ಉಪಸ್ಥಿತ–ರಿದ್ದರು.

ಬ್ರಾಹ್ಮಣ ಸಮಾಜ, ಅರ್ಚಕರ ವಿರುದ್ಧ ಅವಹೇಳನಕಾರಿ ಹೇಳಿಕೆ: ಕ್ರಮಕ್ಕೆ ಆಗ್ರಹ

ಪ್ರಜಾ ಭಾರತ ವರದಿ



ಹಾಸನ: ಬ್ರಾಹ್ಮಣ ಸಮಾಜದ ಮಹಿಳೆಯರು ಹಾಗೂ ಹಿಂದೂ ದೇವಾಲಯಗಳ ಅರ್ಚಕರ ಕು–ರಿತು ಅವಹೇಳನಕಾರಿ ಹೇಳಿಕೆ ನೀಡಿದ್ದಾರೆ ಎನ್ನಲಾದ ನೇಹಾ ಬೋರಾ ಅವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವಂತೆ ಆಗ್ರಹಿಸಿ ಹಾಸನ ಜಿಲ್ಲಾ ಬ್ರಾಹ್ಮಣ ಒಕ್ಕೂಟದ ವತಿಯಿಂದ ಪ್ರತಿಭಟನೆ ನಡೆಸಿ ಜಿಲ್ಲಾಡಳಿತಕ್ಕೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಶ್ರೀ ಶಂಕರ ಮಠದ ಧರ್ಮಾಧಿಕಾರಿ ಎಂ.ಎಸ್. ಶ್ರೀಕಂಠಯ್ಯ ಹಾಗೂ ಜಿಲ್ಲಾ ಬ್ರಾಹ್ಮಣ ಸಭಾದ ಅಧ್ಯಕ್ಷ ಎಚ್. ಎಸ್. ಮಂಜುನಾಥ್ ಮೂರ್ತಿ, ಸಾಮಾಜಿಕ ಜಾಲತಾಣ ಗಳಲ್ಲಿ ಹ–ರಿದಾಡುತ್ತಿರುವ ವಿಡಿಯೋದಲ್ಲಿನ ಹೇಳಿಕೆಗಳು ಬ್ರಾಹ್ಮಣ ಸಮಾಜದ ಭಾವನೆಗಳಿಗೆ ನೋವುಂಟು ಮಾಡಿವೆ. ವ್ಯಕ್ತಿಯೊಬ್ಬರ ತಪ್ಪನ್ನು ಇಡೀ ಸಮುದಾಯಕ್ಕೆ ಅನ್ವಯಿಸಿ ಅವಮಾನಿಸುವುದು ಖಂಡನೀಯ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಅಭಿವ್ಯಕ್ತಿ ಸ್ವಾತಂತ್ರ್ಯದ ಹೆಸ–ರಿನಲ್ಲಿ ಯಾವುದೇ ಸಮುದಾಯದ ಗೌರವಕ್ಕೆ ಧಕ್ಕೆ ತರುವ ಹೇಳಿಕೆಗಳನ್ನು ನೀಡಬಾರದು. ಸಂಬಂಧಪಟ್ಟ ವಿಡಿಯೋ ಹಾಗೂ ಹೇಳಿಕೆಗಳ ನೈಜತೆಯನ್ನು ಪರಿಶೀಲಿಸಿ, ತಪ್ಪಿತಸ್ಥರೆಂದು ಕಂಡು ಬಂದಲ್ಲಿ ಕಾನೂನು ಕ್ರಮ ಕೈಗೊಳ್ಳಬೇಕು. ಸಮಾಜದಲ್ಲಿ ಜಾತಿ ಮತ್ತು ಧಾರ್ಮಿಕ ಸಾಮರಸ್ಯಕ್ಕೆ ಧಕ್ಕೆಯಾಗದಂತೆ ಜಿಲ್ಲಾಡಳಿತ ಸೂಕ್ತ ಕ್ರಮ ವಹಿಸಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಬ್ರಾಹ್ಮಣ ಸಭಾ ನಗರಾಧ್ಯಕ್ಷ ವೆಂಕಟೇಶ್, ಬಬ್ಬೂರ್ ಕಮ್ಮೆ ಸಂಘದ ನಾಗರಾಜು, ಸಂಸ್ಕೃತ ಸಂಘದ ಜಿ.ಕೆ. ಮಂಜುನಾಥ್, ಪ್ರಸನ್ನಕುಮಾರ್, ಚಂದ್ರಶೇಖರ್, ಪ್ರಕಾಶ್, ವೇಣುಗೋಪಾಲ್, ಮಾಧವ ಬಾಳಿಗೆ, ವಿಶ್ವ ಹಿಂದೂ ಪರಿಷತ್ ಪ್ರಾಂತ ಮುಖಂಡ ಎಚ್.ಬಿ. ಪ್ರಣವ್ ಭಾರಧ್ವಾಜ್ ಸೇರಿದಂತೆ ಹಲವರು ಇದ್ದರು.

ಮನೆಮನೆ ಸಾಹಿತ್ಯ ವೇದಿಕೆಯಲ್ಲಿ ಕನ್ನಡ ಸಂಭ್ರಮ



ಪ್ರಜಾ ಭಾರತ ವರದಿ

ಹಾಸನ: ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನಲ್ಲಿ ನಡೆದ ಮನೆಮನೆ 347ನೇ ತಿಂಗಳ ಕಾರ್ಯಕ್ರಮದಲ್ಲಿ 71ನೇ ಕನ್ನಡ ರಾಜ್ಯೋತ್ಸವವನ್ನು ಆಚರಿಸಲಾಯಿತು.

ಕಾರ್ಯಕ್ರಮದ ಆರಂಭದಲ್ಲಿ ಅತಿಥಿ ಗಣ್ಯರು ಹಾಗೂ ಹಿರಿಯ ಸಾಹಿತಿಗಳು ನಾಡದೇವತೆ ಭುವನೇಶ್ವರಿಗೆ ಪುಷ್ಪಾರ್ಚನೆ ಸಲ್ಲಿಸಿದರು. ಬಳಿಕ ಸಿಎಂ ಚನ್ನೇಗೌಡ ಅವರ ಪ್ರಾರ್ಥನೆಯೊಂದಿಗೆ ಕವಿಗೋಷ್ಠಿ ಆರಂಭಗೊಂಡಿತು. ಯೋಗ ಸಾವಿತ್ರಿ ಸ್ವಾಗತಿಸಿದರು.

ಹಿರಿಯ ಸಾಹಿತಿ ಹಾಗೂ ಶಿಕ್ಷಕಿ ಕಲಾವತಿ ಮಧುಸೂಧನ್ ರಚಿಸಿರುವ 'ಅರಿವಂತೆ ಗುರು' ಕೃತಿಯನ್ನು ಕವಯತ್ರಿ ಚಂದ್ರಕಲಾ ಎಂ. ಅವರು ವಿಮರ್ಶಿಸಿದರು. ಗುರುವಿನ ಮಹತ್ವ, ಶಿಕ್ಷಣದ ಮೌಲ್ಯ, ಸ್ವಯಂ ತಿದ್ದಿಕೊಳ್ಳುವಿಕೆ, ಸಾಮಾಜಿಕ, ಧಾರ್ಮಿಕ ಹಾಗೂ ಆಧ್ಯಾತ್ಮಿಕ ಚಿಂತನೆಗಳು, ಪರಿಸರ ಸಂರಕ್ಷಣೆ ಸೇರಿದಂತೆ ಬದುಕಿಗೆ ಅಗತ್ಯವಾದ ಹಲವು ವಿಚಾರಗಳನ್ನು ಕೃತಿಯಲ್ಲಿ ಮನಮುಟ್ಟುವಂತೆ ವಿವರಿಸಲಾಗಿದೆ ಎಂದು ತಿಳಿಸಿದರು.

ದಯಾನಂದ್ ಆಡಿಟ್ ಕಾರ್ಯಕ್ರಮದ ಪ್ರಾಯೋಜಕತ್ವ ವಹಿಸಿದ್ದರು. ಶಿಕ್ಷಕಿ ಹಾಗೂ ಕವಯತ್ರಿ ಶಾಲಿನಿ ನಿರೂಪಿಸಿದರು. ಕಾಮಾಕ್ಷಿ ಕೃಷ್ಣಮೂರ್ತಿ ಅಧ್ಯಕ್ಷತೆ ವಹಿಸಿದ್ದರು. ರಮೇಶ್ ದಿಬ್ಬೂರು ಕನ್ನಡ ರಾಜ್ಯೋತ್ಸವದ ಗೀತೆಗಳನ್ನು ಹಾಡಿ ವಂದಿಸಿದರು.

ಕವಿಗೋಷ್ಠಿಯಲ್ಲಿ ಎಚ್.ಎನ್. ಭಾರತಿ, ಎನ್.ಎಲ್. ಚನ್ನೇಗೌಡ, ಚಂದ್ರಕಲಾ ಎಂ., ಲಕ್ಷ್ಮೀದೇವಿ ದಾಸಪ್ಪ, ಪವನ್ ಕುಮಾರ್, ಸಿ.ಕೆ. ತಿಮ್ಮೇಗೌಡ, ಚೆನ್ನಹಳ್ಳಿ ರಮೇಶ್, ಸುಂದರೇಶ್, ಡಿ. ಉಡುವಾರೆ, ಮಂಜುಳ ಪ್ರಸಾದ್, ಜಿ.ಎಸ್. ಕಲಾವತಿ ಮಧುಸೂಧನ್, ಡಾ. ಶಾಂತ ಅತ್ನಿ, ಬಿ.ಎನ್. ಗಿರಿಜಾಂಬ, ಡಾ. ಕೃಷ್ಣಪ್ಪ, ಪ್ರೀತಿ, ಶಾಲಿನಿ ಹಾಗೂ ಸಾವಿತ್ರಿ ಸೇರಿದಂತೆ ಹಲವು ಕವಿಗಳು ಭಾಗವಹಿಸಿದ್ದರು.

ಬೆದರಿಕೆ, ಕಮಿಷನ್ ವಸೂಲಿಗೆ ಕರವೇಯಲ್ಲಿ ಅವಕಾಶವಿಲ್ಲ: ಬೋಜೇಗೌಡ



ಪ್ರಜಾ ಭಾರತ ವರದಿ

ಬೇಲೂರು: ಕರ್ನಾಟಕ ರಕ್ಷಣಾ ವೇದಿಕೆ (ಪ್ರವೀಣ್ ಶೆಟ್ಟಿ ಬಣ) ಯಾವುದೇ ಅಧಿಕಾರಿಗಳಿಗೆ ಬೆದರಿಕೆ ಹಾಕಿ ಹಣ ವಸೂಲಿ ಮಾಡುವುದಾಗಲಿ, ಭೂಮಾಫಿಯಾದಿಂದ ಕಮಿಷನ್ ಪಡೆಯುವುದಾಗಲಿ ಮಾಡುತ್ತಿಲ್ಲ. ಕನ್ನಡಪರ ಹಾಗೂ ಜನಪರ ಸೇವೆಯೇ ಸಂಘಟನೆಯ ಮುಖ್ಯ ಧ್ಯೇಯವಾಗಿದೆ ಎಂದು ಕರವೇ ತಾಲ್ಲೂಕು ಅಧ್ಯಕ್ಷ ವಿ.ಎಸ್. ಬೋಜೇಗೌಡ ಹೇಳಿದರು.

ಪಟ್ಟಣದ ಕೆಂಪೇಗೌಡ ವೃತ್ತದಲ್ಲಿ ಕರವೇ ತಾಲ್ಲೂಕು ಘಟಕದ ವತಿಯಿಂದ ಆಯೋಜಿಸಿದ್ದ 71ನೇ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಕಳೆದ ಹತ್ತು ವರ್ಷಗಳಿಂದ ನಿರಂತರವಾಗಿ ಇಲ್ಲಿ ಕನ್ನಡ ರಾಜ್ಯೋತ್ಸವ ಆಚರಿಸಿಕೊಂಡು ಬರಲಾಗುತ್ತಿದೆ. ನಾಡು, ನುಡಿ, ನೆಲ, ಜಲ ಹಾಗೂ ಕನ್ನಡಿಗರ ಹಕ್ಕುಗಳ ರಕ್ಷಣೆಗಾಗಿ ಸಂಘಟನೆ ಹೋರಾಟ ನಡೆಸುತ್ತಿದೆ ಎಂದರು.

ಕಳೆದ 15 ವರ್ಷಗಳಿಂದ ರಾಜ್ಯದ ವಿವಿಧ ಭಾಗಗಳಲ್ಲಿ ನಡೆದ ಕನ್ನಡಪರ ಹೋರಾಟಗಳಲ್ಲಿ ಸಂಘಟನೆ ಸಕ್ರಿಯವಾಗಿ ಪಾಲ್ಗೊಂಡಿದೆ. ಹೇಮಾವತಿ ನೀರಿನ ಹಕ್ಕು ಸೇರಿದಂತೆ ಹಲವು ಜನಪರ ಹೋರಾಟಗಳಲ್ಲಿ ಭಾಗವಹಿಸಿದ್ದು, ಮುಂದೆಯೂ ಸ್ಥಳೀಯ ಸಮಸ್ಯೆಗಳ ಪರಿಹಾರಕ್ಕಾಗಿ ಹೋರಾಟ ಮುಂದುವರಿಸಲಾಗುವುದು ಎಂದು ತಿಳಿಸಿದರು.

ಕನ್ನಡ ರಾಜ್ಯೋತ್ಸವ ಕೇವಲ ಸಂಭ್ರಮಕ್ಕೆ ಸೀಮಿತವಾಗದೆ ಕನ್ನಡ ಭಾಷೆ, ಸಂಸ್ಕೃತಿ ಮತ್ತು ಪರಂಪರೆಯ ಸಂರಕ್ಷಣೆಯ ಸಂಕಲ್ಪವಾಗಬೇಕು ಎಂದರು.

ಕಾರ್ಯಕ್ರಮದಲ್ಲಿ ಸತೀಶ್, ಲೋಕೇಶ್, ಮಂಜು ಆಚಾರ್, ಶ್ರೀನಿವಾಸ್, ನವೀನ್, ಹುಸೇನ್, ಕಾರ್ತಿಕ್ ಸೇರಿದಂತೆ ಸಂಘಟನೆಯ ಪದಾಧಿಕಾರಿಗಳು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

ಕನ್ನಡ ಚಿತ್ರರಂಗದ ಪ್ರೀತಿಯೇ ನನ್ನ ಶಕ್ತಿ: ಟೆನ್ನಿಸ್ ಕೃಷ್ಣ

ಪ್ರಜಾ ಭಾರತ ವರದಿ



ಹಾಸನ: ಕನ್ನಡ ಚಿತ್ರರಂಗದ ಹಿರಿಯ ಹಾಸ್ಯನಟ ಟೆನ್ನಿಸ್ ಕೃಷ್ಣ ಅವರು ಗುರುವಾರ ಹಾಸನಾಂಬೆ ದೇವಿಯ ದರ್ಶನ ಪಡೆದು, ಬಳಿಕ ಮಾಧ್ಯಮಗಳೊಂದಿಗೆ ಮಾತನಾಡಿದರು.

ಕನ್ನಡ ಚಿತ್ರರಂಗದಲ್ಲಿ 600ಕ್ಕೂ ಹೆಚ್ಚು ಚಿತ್ರಗಳಲ್ಲಿ ಅಭಿನಯಿಸಿದ್ದು, ಕನ್ನಡ ಅಭಿಮಾನಿಗಳ ಪ್ರೀತಿ ಮತ್ತು ಆಶೀರ್ವಾದವೇ ತಮ್ಮ ಕಲಾ ಬದುಕಿನ ದೊಡ್ಡ ಶಕ್ತಿ. ಅವಕಾಶಗಳು ಕಡಿಮೆಯಾದರೂ ಕನ್ನಡ ಚಿತ್ರರಂಗ ತಮ್ಮನ್ನು ಕೈಬಿಟ್ಟಿಲ್ಲ ಎಂದು ಹೇಳಿದರು.ಈವರೆಗೆ ಸುಮಾರು 14 ಚಿತ್ರಗಳಲ್ಲಿ ನಾಯಕನಟನಾಗಿ ಅಭಿನಯಿಸಿದ್ದು, ಇದೀಗ ವಯಸ್ಸಿಗೆ ತಕ್ಕ ವಿಭಿನ್ನ ಕಥಾಹಂದರದ ಚಿತ್ರದ ಮೂಲಕ ಮತ್ತೆ ನಾಯಕನಾಗಿ ತೆರೆ ಮೇಲೆ ಬರಲು ಸಿದ್ಧತೆ ನಡೆಸಿದ್ದೇನೆ. ಪ್ರಶಸ್ತಿಗೆ ಅರ್ಹವಾಗುವಂತಹ ವಿಭಿನ್ನ ಚಿತ್ರ ಮಾಡುವ ಉದ್ದೇಶವಿದೆ ಎಂದರು. ನಿರ್ದೇಶಕ ಚರಣ್‌ರಾಜ್ ಅವರ ಬ್ಯಾನರ್‌ನಲ್ಲಿ ಹೊಸ ಚಿತ್ರವೊಂದರಲ್ಲಿ ಅಭಿನಯಿಸುತ್ತಿದ್ದು, ಡಿಸೆಂಬರ್ ಅಂತ್ಯಕ್ಕೆ ಚಿತ್ರೀಕರಣ ಆರಂಭವಾಗುವ ನಿರೀಕ್ಷೆಯಿದೆ. ಹಿರಿಯ ನಟ ದೊಡ್ಡಣ್ಣ ಅವರೊಂದಿಗೂ ತೆರೆ ಹಂಚಿಕೊಳ್ಳುವ ಅವಕಾಶ ದೊರೆತಿ–ದೆ. ಅಲ್ಲದೆ, ನಿರ್ದೇಶಕ ಎಸ್. ನಾರಾಯಣ್ ಅವರ ಚಿತ್ರದಲ್ಲಿಯೂ ಅಭಿನಯಿಸುತ್ತಿದ್ದು, ಹೊಸ ಚಿತ್ರಗಳ ಮೂಲಕ ಅಭಿಮಾನಿಗಳಿಗೆ ಮತ್ತಷ್ಟು ಮನರಂಜನೆ ನೀಡುವ ವಿಶ್ವಾಸವಿದೆ ಎಂದು ತಿಳಿಸಿದರು.

ತೆಲುಗು ಚಿತ್ರರಂಗದಿಂದಲೂ ಅವಕಾಶಗಳು ಬಂದಿದ್ದರೂ ಕನ್ನಡ ಭಾಷೆ ಮತ್ತು ಚಿತ್ರರಂಗದ ಮೇಲಿನ ಪ್ರೀತಿಯಿಂದ ಕನ್ನಡದಲ್ಲಿಯೇ ಮುಂದುವರಿದಿದ್ದೇನೆ. ಕನ್ನಡಿಗರ ಅಭಿಮಾನ ಹಾಗೂ ಕನ್ನಡ ಭುವನೇಶ್ವರಿ ತಾಯಿಯ ಆಶೀರ್ವಾದ ದಿಂದಲೇ ಇಷ್ಟು ವರ್ಷ ಕಲಾವಿದನಾಗಿ ಗುರುತಿಸಿಕೊಳ್ಳಲು ಸಾಧ್ಯವಾಗಿದೆ ಎಂದು ಹೇಳಿದರು.

Printed, Published & Owned By Dinesh B G and Printed at Honalu Graphic, Word No. 2, Ashok Road Behind Stadium, Satyamangala Village, Vidya Nagara Hassan District, Karnataka - 573201 and Published at Ward No.1 Behind Budda School, Halebeedu Road Shanthi Nagara Bantenahalli Belur Taluk Hassan Dist, Karnataka - 573115 - Editor Dinesh B G